## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶ್ರೀಮತಿ ಜಯಮ್ಮ, ಹಿಂದಿನ ಉಪಾಧ್ಯಕ್ಷರು, ಬೀಜಗನಹಳ್ಳಿ ಗ್ರಾಮ ಪಂಚಾಯಿತಿ, ಹುಣಸೂರು ತಾಲ್ಲೂಕು, ಮೈಸೂರು ಜಿಲ್ಲೆ ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್‌ರಾಜ್ ಅಧಿನಿಯಮ 1993 ರ ಪ್ರಕರಣ 43(ಎ)(vi)ರನ್ವಯ ಕ್ರಮ ಕೈಗೊಳ್ಳುವ ಬಗ್ಗೆ.

**ಓದಲಾಗಿದೆ:**

1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಮೈಸೂರು ಇವರ ಪತ್ರ ಸಂಖ್ಯೆ:ಡಿಇವಿ6/87/2017-18, ದಿನಾಂಕ:12.02.2018.
2. ಸರ್ಕಾರದ ಆದೇಶ ಪತ್ರ ಸಂಖ್ಯೆ:ಗ್ರಾಅಪ 1135 ಗ್ರಾಪಂಅ 2018, ದಿನಾಂಕ:02.02.2019.
3. ಸರ್ಕಾರದ ಪತ್ರ ಸಂಖ್ಯೆ: ಗ್ರಾಅಪ203ಗ್ರಾಪಂಅ 2019, ದಿನಾಂಕ:19.02.2019.
4. ಪ್ರಾದೇಶಿಕ ಆಯುಕ್ತರು, ಮೈಸೂರು ವಿಭಾಗ, ಮೈಸೂರು ಇವರ ಪತ್ರ ಸಂಖ್ಯೆ:ಚುನಾವಣೆ ಸಿಆರ್:03/2018-19, ದಿನಾಂಕ:26.03.2020.
5. ಸರ್ಕಾರದ ಎರಡನೇ ಕಾರಣ ಕೇಳುವ ನೋಟೀಸ್ ಸಂಖ್ಯೆ: ಗ್ರಾಅಪ 361ಗ್ರಾಪಂಅ 2020, ದಿನಾಂಕ:06.05.2020.
6. ಕಾರ್ಯನಿರ್ವಾಹಕಅಧಿಕಾರಿ, ತಾಲ್ಲೂಕುಪಂಚಾಯಿತಿ, ಹುಣಸೂರು ತಾಲ್ಲೂಕು, ಮೈಸೂರು ಜಿಲ್ಲೆ ಇವರ ಪತ್ರ ಸಂಖ್ಯೆ:ತಾಪಂಹು/ಎ5/2020-21 ದಿನಾಂಕ:01.07.2020.
7. ಸರ್ಕಾರದ ವಿಚಾರಣಾ ನೋಟೀಸು ಸಂಖ್ಯೆ: ಗ್ರಾಅಪ361ಗ್ರಾಪಂಅ 2020, ದಿನಾಂಕ:18.01.2021.

***

ಶ್ರೀಮತಿ ಜಯಮ್ಮ, ಹಿಂದಿನ ಉಪಾಧ್ಯಕ್ಷರು, ಬೀಜಗನಹಳ್ಳಿ ಗ್ರಾಮ ಪಂಚಾಯಿತಿ, ಹುಣಸೂರು ತಾಲ್ಲೂಕು, ಮೈಸೂರು ಜಿಲ್ಲೆ ಇವರು(ಇನ್ನು ಮುಂದೆಎದುರುದಾರರು ಎಂದುಕರೆಯಲ್ಪಡುತ್ತಾರೆ) ಇವರು ತಮ್ಮ ಅಧಿಕಾರಾವಧಿಯಲ್ಲಿ ಈ ಕೆಳಕಂಡ ಆರೋಪಗಳನ್ನು ಎಸಗಿರುವುದಾಗಿ, ಮುಖ್ಯಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಮೈಸೂರು ಜಿಲ್ಲೆ ರವರು ಮೇಲೆ ಓದಲಾದ ಕ್ರಮಾಂಕ (1)ರಲ್ಲಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

**ದೋಷಾರೋಪಣೆ:-**

ಹುಣಸೂರು ತಾಲ್ಲೂಕಿನ ಎಮ್ಮೆಕೊಪ್ಪಲು ಗ್ರಾಮದ ಶ್ರೀ ರಾಮಬೋವಿ ಬಿನ್ ದಾಸಬೋವಿ, ರವರು ಸಲ್ಲಿಸಿರುವ ದೂರಿನ ಆಧಾರದ ಮೇಲೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಮೈಸೂರು ಜಿಲ್ಲೆ ರವರು ಪ್ರಕರಣವನ್ನು ಪರಿಶೀಲಿಸಿ, ಈ ಕೆಳಕಂಡಂತೆ ದೋಷಾರೋಪಣೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ. ಶ್ರೀಮತಿ ಜಯಮ್ಮ, ಹಿಂದಿನ ಉಪಾಧ್ಯಕ್ಷರು, ಬೀಜಗನಹಳ್ಳಿ ಗ್ರಾಮ ಪಂಚಾಯಿತಿ ಇವರು, ಹಾಲಗೆರೆ ಗ್ರಾಮವು ಈ ಹಿಂದೆ ಗೋವಿಂದಹಳ್ಳಿ ಗ್ರಾಮ ಪಂಚಾಯಿತಿ, ವ್ಯಾಪ್ತಿಗೆ ಒಳಪಟ್ಟಿದ್ದಾಗ 2014-15ನೇ ಸಾಲಿನಲ್ಲಿ ತಮ್ಮ ಪತಿ ಮಹದೇವ ಹೆಸರಿನಲ್ಲಿ ಶೌಚಾಲಯ ನಿರ್ಮಿಸಿ ಗೋವಿಂದನಹಳ್ಳಿ ಗ್ರಾಮ ಪಂಚಾಯಿತಿಯಿಂದ ಸಹಾಯಧನ ಪಡೆದುಕೊಂಡಿರುತ್ತಾರೆ. ಇವರ ಮಗನಾದ ಶ್ರೀ ಮಹೇಶ್ ಬಿನ್ ಮಹದೇವ ಇವರ ಹೆಸರಿನಲ್ಲಿ ಮತ್ತೊಮ್ಮೆ ಶೌಚಾಲಯ ನಿರ್ಮಿಸಿರುವುದಾಗಿ ಬೀಜಗನಹಳ್ಳಿ ಗ್ರಾಮ ಪಂಚಾಯಿತಿ ವತಿಯಿಂದ ಸಹಾಯಧನ ಪಡೆದುಕೊಂಡಿರುತ್ತಾರೆ.

...2

ಶ್ರೀಮತಿ ಜಯಮ್ಮ, ಹಿಂದಿನ ಉಪಾಧ್ಯಕ್ಷಕರು, ಬೀಜಗನಹಳ್ಳಿ ಗ್ರಾಮ ಪಂಚಾಯಿತಿ, ಇವರು ವಸತಿ ಯೋಜನೆಯಲ್ಲಿ ಇವರ ಮಗಳಾದ ಶ್ರೀಮತಿ ಲಕ್ಷ್ಮೀ ಕೋಂ ಶಿವಕುಮಾರ್ ಇವರ ಹೆಸರಿನಲ್ಲಿ ಬಸವ ವಸತಿ ಯೋಜನೆಯಲ್ಲಿ ಮನೆ ಮಂಜೂರು ಮಾಡುವ ಬಗ್ಗೆ ಫಲಾನುಭವಿಯಾಗಿ ಆಯ್ಕೆ ಮಾಡಲಾಗಿದ್ದು, ಸದರಿ ಮನೆಯು ತಳಪಾಯ ನಿರ್ಮಿಸಿರುವುದು ಕಂಡು ಬಂದಿರುತ್ತದೆ. ಗ್ರಾಮ ಪಂಚಾಯಿತಿ ವತಿಯಿಂದ ಜಿ.ಪಿ.ಎಸ್ ಮಾಡಿರುವುದಿಲ್ಲ. ಶ್ರೀಮತಿ ಜಯಮ್ಮ, ಉಪಾಧ್ಯಕ್ಷರುಇವರ ಮಗನಾದ ಶ್ರೀಮತಿ ಲಕ್ಷ್ಮೀ ಇವರು ಮೈಸೂರಿನಲ್ಲಿ ವಾಸವಿರುವುದು ತನಿಖೆಯಿಂದ ಕಂಡು ಬಂದಿರುತ್ತದೆ.

ಕರ್ನಾಟಕಗ್ರಾಮ ಸ್ವರಾಜ್ ಮತ್ತು ಪಂಚಾಯತ್‌ರಾಜ್‌ಅಧಿನಿಯಮ 1993 ರ 43(ಎ), 48(4) ಮತ್ತು 48(5) ರಡಿಗ್ರಾಮ ಪಂಚಾಯಿತಿ ಅಧ್ಯಕ್ಷರು, ಉಪಾಧ್ಯಕ್ಷರುಗಳು ಹಾಗೂ ಸದಸ್ಯರುಗಳ ಮೇಲಿನ ಆರೋಪಗಳಿಗೆ ವಿಚಾರಣೆ ನಡೆಸಲು ಮೇಲೆ ಕ್ರಮಾಂಕ (2)ರಲ್ಲಿ ಪ್ರಾದೇಶಿಕ ಆಯುಕ್ತರುಗಳಿಗೆ ಅಧಿಕಾರ ಪ್ರತ್ಯಾಯೋಜಿಸಲಾಗಿದ್ದು, ಅದರನ್ವಯ ಸದರಿ ಪ್ರಕರಣದ ವಿಚಾರಣೆ ನಡೆಸಿ, ಸರ್ಕಾರಕ್ಕೆ ಸಲ್ಲಿಸುವಂತೆ ಮೇಲೆ ಓದಲಾದಕ್ರಮಾಂಕ(3)ರ ಪತ್ರದಲ್ಲಿ ಈ ಪ್ರಕರಣವನ್ನು ಪ್ರಾದೇಶಿಕ ಆಯುಕ್ತರು, ಮೈಸೂರು ವಿಭಾಗ, ಮೈಸೂರುರವರಿಗೆ ವಹಿಸಲಾಗಿತ್ತು.

ಅದರಂತೆ, ಪ್ರಾದೇಶಿಕ ಆಯುಕ್ತರು, ಮೈಸೂರು ವಿಭಾಗ, ಮೈಸೂರು ಇವರು ಈ ಪ್ರಕರಣದ ವಿಚಾರಣೆ ನಡೆಸಿ, ಎದುರುದಾರರಾದ ಶ್ರೀಮತಿ ಜಯಮ್ಮ, ಹಿಂದಿನ ಉಪಾಧ್ಯಕ್ಷರು, ರವರು ತಮ್ಮ ಅಧಿಕಾರಾವಧಿಯಲ್ಲಿ ಅಧಿಕಾರ ದುರುಪಯೋಗಪಡಿಸಿಕೊಂಡಿರುವುದು ಸಾಬೀತಾಗಿದ್ದು, ಸದರಿಯವರ ವಿರುದ್ಧ ಕರ್ನಾಟಕಗ್ರಾಮ ಸ್ವರಾಜ್ ಮತ್ತು ಪಂಚಾಯತ್‌ರಾಜ್ ಅಧಿನಿಯಮ 1993 ರ ಪ್ರಕರಣ 48(4) ರನ್ವಯ ಕ್ರಮ ಜರುಗಿಸಬಹುದಾಗಿ, ಅಭಿಪ್ರಾಯಪಟ್ಟು ಮೇಲೆ ಓದಲಾದ ಕ್ರಮಾಂಕ (4)ರಲ್ಲಿ ಸರ್ಕಾರಕ್ಕೆ ವರದಿಯನ್ನು ಸಲ್ಲಿಸಿರುತ್ತಾರೆ.

ಪ್ರಾದೇಶಿಕ ಆಯುಕ್ತರ ಅಭಿಪ್ರಾಯದನ್ವಯ ಕ್ರಮವಹಿಸುವ ಪೂರ್ವದಲ್ಲಿ ಎದುರುದಾರರಾದ ಶ್ರೀಮತಿ ಜಯಮ್ಮ, ಹಿಂದಿನ ಉಪಾಧ್ಯಕ್ಷರು, ಮೇಲೆ ಓದಲಾದ ಕ್ರಮಾಂಕ (5)ರಲ್ಲಿ ಎರಡನೇ ಕಾರಣ ಕೇಳುವ ನೋಟೀಸ್ ಜಾರಿ ಮಾಡಲಾಗಿದ್ದು, ಸದರಿಯವರು ಲಿಖಿತ ಸಮಜಾಯಿಷಿಯನ್ನು ಸರ್ಕಾರಕ್ಕೆ ಸಲ್ಲಿಸಿರುವುದಿಲ್ಲ. ಅಲ್ಲದೇ, ಎದುರುದಾರರಿಗೆ ಎರಡನೇ ಕಾರಣ ಕೇಳುವ ನೋಟಿಸ್ಸನ್ನು ಜಾರಿಗೊಳಿಸಿರುವುದಾಗಿ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ ಮೈಸೂರು ಇವರು ಮೇಲೆ ಓದಲಾದ(6) ರಲ್ಲಿ ಸರ್ಕಾರಕ್ಕೆ ವರದಿ ಸಲ್ಲಿಸಿರುತ್ತಾರೆ.

ಎದುರುದಾರರಿಗೆ ಅಹವಾಲು ಹೇಳಿಕೊಳ್ಳಲು ಅವಕಾಶವನ್ನು ನೀಡಲು ನಿರ್ಣಯಿಸಿ, ಮೇಲೆ ಓದಲಾದ ಕ್ರಮಾಂಕ(7) ರಲ್ಲಿ ವಿಚಾರಣಾ ನೋಟಿಸ್ಸನ್ನು ಜಾರಿ ಮಾಡಿ ಪ್ರಕರಣವನ್ನು ದಿನಾಂಕ:21.01.2021 ರಂದು ಪ್ರಧಾನ ಕಾರ್ಯದರ್ಶಿಯವರ ಅರೆನ್ಯಾಯಿಕ ನ್ಯಾಯಾಲಯದಲ್ಲಿ ವಿಚಾರಣೆಗೆ ಒಳಪಡಿಸಲಾಯಿತು. ಎದುರುದಾರರಾದ ಶ್ರೀಮತಿ ಜಯಮ್ಮ, ಹಿಂದಿನ ಉಪಾಧ್ಯಕ್ಷರು ಸದರಿ ವಿಚಾರಣೆಗೆ ಗೈರು ಹಾಜರಾಗಿದ್ದು, ಅವರ ಪರವಾಗಿ ಯಾರು ಹಾಜರಾಗಿರುವುದಿಲ್ಲ. ಎದುರುದಾರರಿಗೆ ತಮ್ಮ ಅಹವಾಲು ಸಲ್ಲಿಸಲು ಸಾಕಷ್ಟು ಕಾಲಾವಕಾಶ ನೀಡಲಾಗಿದೆ.

ಕರ್ನಾಟಕಗ್ರಾಮ ಸ್ವರಾಜ್ ಮತ್ತು ಪಂಚಾಯತ್‌ರಾಜ್‌ಅಧಿನಿಯಮ 1993 ಅಧಿನಿಯಮ ಪ್ರಕರಣ 43(ಎ) ಹಾಗೂ 48(4) ರಡಿ ಸದರಿ ಪ್ರಕರಣವನ್ನು ಪರಿಶೀಲಿಸಿದಾಗ, ಎದುರುದಾರರು ತಮ್ಮ ಅಧಿಕಾರಾವದಿಯಲ್ಲಿ ಅಧಿಕಾರ ದುರುಪಯೋಗಪಡಿಸಿಕೊಂಡಿರುವುದು ಸಾಬೀತಾಗಿರುವುದರಿಂದ ಸದರಿಯವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್‌ರಾಜ್(ತಿದ್ದುಪಡಿ) ಅಧಿನಿಯಮ 2020 ರಪ್ರಕರಣ43(ಎ)(vi) ರಡಿ ಮೈಸೂರು ಜಿಲ್ಲೆ, ಹುಣಸೂರು ತಾಲ್ಲೂಕು, ಬೀಜಗನಹಳ್ಳಿ ಗ್ರಾಮ ಪಂಚಾಯಿತಿಯ ಅಧ್ಯಕ್ಷ ಹಾಗೂ ಸದಸ್ಯತ್ವ ಸ್ಥಾನದಿಂದ ತೆಗೆದು ಹಾಕಲು ನಿರ್ಧರಿಸಿ,

ಅದರಂತೆ ಈ ಕೆಳಕಂಡ ಆದೇಶ

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ361ಗ್ರಾಪಂಅ2020, ಬೆಂಗಳೂರು, ದಿನಾಂಕ:05.04.2021.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಶ್ರೀಮತಿ ಜಯಮ್ಮ, ಹಿಂದಿನ ಉಪಾಧ್ಯಕ್ಷರು, ಬೀಜಗನಹಳ್ಳಿ ಗ್ರಾಮ ಪಂಚಾಯಿತಿ, ಹುಣಸೂರು ತಾಲ್ಲೂಕು, ಮೈಸೂರು ಜಿಲ್ಲೆ ಇವರ ವಿರುದ್ಧದ ಅಧಿಕಾರ ದುರುಪಯೋಗಪಡಿಸಿಕೊಂಡಿರುವ ಆರೋಪವು ಸಾಬೀತಾಗಿದ್ದು, ಸದರಿಯವರು ಪ್ರಸ್ತುತ ಗ್ರಾಮ ಪಂಚಾಯಿತಿಯ ಸದಸ್ಯರಲ್ಲದ ಕಾರಣ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್‌ರಾಜ್(ತಿದ್ದುಪಡಿ) ಅಧಿನಿಯಮ1993ರ ಪ್ರಕರಣ 43(ಎ)(vi) ರಡಿ ಹಾಗೂ ಪ್ರಕರಣ12(ಎಲ್) ರನ್ವಯ ಸದರಿಯವರು ಆರು ವರ್ಷಗಳ ಕಾಲ ಚುನಾವಣೆಗೆ ನಿಲ್ಲದಂತೆ ಅನರ್ಹಗೊಳಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

B. Naveenkumar 05/04/21
**(ನವೀನ್‌ಕುಮಾರ್ ಬಿ.)**
ಸರ್ಕಾರದಅಧೀನ ಕಾರ್ಯದರ್ಶಿ(ಪ್ರ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್‌ಇಲಾಖೆ. (ಜಿ.ಪಂ)

ಗೆ:

1) ಪ್ರಾದೇಶಿಕ ಆಯುಕ್ತರು, ಮೈಸೂರು ವಿಭಾಗ, ಮೈಸೂರು.
2) ಆಯುಕ್ತರು, ಪಂಚಾಯತ್‌ರಾಜ್ ಆಯುಕ್ತಾಲಯ, ಕೆ.ಜಿರಸ್ತೆ, ಬೆಂಗಳೂರು.-09
3) ಮುಖ್ಯ ಕಾರ್ಯನಿರ್ವಾಹಕಾಧಿಕಾರಿ, ಜಿಲ್ಲಾ ಪಂಚಾಯಿತಿ, ಮೈಸೂರುಜಿಲ್ಲೆ.
4) ಕಾರ್ಯನಿರ್ವಾಹಕಾಧಿಕಾರಿ, ತಾಲ್ಲೂಕು ಪಂಚಾಯಿತಿ ಹುಣಸೂರು, ಮೈಸೂರು ಜಿಲ್ಲೆ.
5) ಶ್ರೀಮತಿ ಜಯಮ್ಮ, ಹಿಂದಿನ ಉಪಾಧ್ಯಕ್ಷರು, ಬೀಜಗನಹಳ್ಳಿ ಗ್ರಾಮ ಪಂಚಾಯಿತಿ, ಹುಣಸೂರು ತಾಲ್ಲೂಕು, ಮೈಸೂರು ಜಿಲ್ಲೆ.
6) ಗಣಕ ಕೋಶ-ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
7) ಕಛೇರಿ ಪ್ರತಿ/ಹೆಚ್ಚುವರಿ ಪ್ರತಿ.

ಪ್ರತಿಯನ್ನು ಮಾಹಿತಿಗಾಗಿ:

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2) ಸರ್ಕಾರದ ಕಾರ್ಯದರ್ಶಿಗಳು (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆ ರವರ ಆಪ್ತಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3) ನಿರ್ದೇಶಕರು(ಪಂ.ರಾಜ್-1), ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಸಹಾಯಕರು.